# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 732 (834) |
| ಸದಸ್ಯರ ಹೆಸರು | : | ಶ್ರೀ ಎಸ್.ವಿ. ಸಂಕನೂರ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 20.12.2021 |
| ಉತ್ತರಿಸುವವರು | : | ಅರಣ್ಯ, ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಗದಗ ಜಿಲ್ಲೆಯ ಮಾಗಡಿ ಕೆರೆಯ ಪಕ್ಷಿಧಾಮದಲ್ಲಿ ಇತ್ತೀಚೆಗೆ ಡಿಸೆಂಬರ್ ನಲ್ಲಿ ವಿದೇಶದಿಂದ ಬರುವ ಬಾರ ಹೆಡೆಡ ಗೂಸ್ ಪಕ್ಷಿಗಳು ಮರಣ ಹೊಂದುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಈ ವಿದೇಶಿ ಪಕ್ಷಿಗಳು ಯಾವ ಕಾರಣಕ್ಕಾಗಿ ಮರಣ ಹೊಂದುತ್ತಿವೆ; ಇದರ ಕುರಿತು ಇಲಾಖೆ ಪರಿಶೀಲನೆ ನಡೆಸಿದೆಯೇ; (ಮಾಹಿತಿ ನೀಡುವುದು) | ಗದಗ ಜಿಲ್ಲೆಯ ಮಾಗಡಿ ಕೆರೆ ಸಂರಕ್ಷಣಾ ಮೀಸಲು ಪ್ರದೇಶದಲ್ಲಿ ಬಾರ್ ಹೆಡೆಡ್ ಗೂಸ್ (ಪಟ್ಟೆ ತಲೆ ಹೆಬ್ಬಾತು) ವಿದೇಶಿ ವಲಸೆ ಪಕ್ಷಿಗಳು ಡಿಸೆಂಬರ್ ತಿಂಗಳಿನಲ್ಲಿ ಇಲ್ಲಿಗೆ ಬಂದು ಮರಣ ಹೊಂದಿದ್ದು, ಪಕ್ಷಿಗಳ ಮರಣೋತ್ತರ ಪರೀಕ್ಷೆಯನ್ನು ಪಶುವೈದ್ಯಾಧಿಕಾರಿಗಳಿಂದ ಜರುಗಿಸಲಾಗಿದ್ದು, ಮರಣೋತ್ತರ ಪರೀಕ್ಷೆ ನಿರೀಕ್ಷೆಯಲ್ಲಿರುತ್ತದೆ.<br><br>ಅಸ್ವಸ್ಥಗೊಂಡ ವಿದೇಶಿ ವಲಸೆ ಪಕ್ಷಿಗಳಿಗೆ ತಜ್ಞ ಪಶುವೈದ್ಯರಿಂದ ಚಿಕಿತ್ಸೆ ಮಾಡಿಸಲಾಗಿದ್ದು, ಅಸ್ವಸ್ಥಗೊಂಡ ವಲಸೆ ಪಕ್ಷಿಗಳ ವಿವಿಧ ಸ್ಯಾಂಪಲ್ ಗಳನ್ನು ಪರೀಕ್ಷೆಗೊಳಪಡಿಸಲು ಈಗಾಗಲೇ ಪ್ರಯೋಗಾಲಯಕ್ಕೆ ಕಳುಹಿಸಿಕೊಡಲಾಗಿರುತ್ತದೆ. |
| ಇ) | ವಿದೇಶಿ ಪಕ್ಷಿಗಳ ಜೀವ ರಕ್ಷಣೆ ಮಾಡಲು ಇಲಾಖೆ ಏನೇನು ಮುಂಜಾಗ್ರತೆ ಕ್ರಮಗಳನ್ನು ಕೈಗೊಂಡಿದೆ? (ಮಾಹಿತಿ ನೀಡುವುದು) | 1. ಗದಗಜಿಲ್ಲೆಯ ಮಾಗಡಿ ಕೆರೆ ಸಂರಕ್ಷಣಾ ಮೀಸಲು ಪ್ರದೇಶ ಹಾಗೂ ಸುತ್ತಮುತ್ತಲಿನ ಪ್ರದೇಶದಲ್ಲಿ ಸಿಬ್ಬಂದಿಗಳು ಹಗಲು ರಾತ್ರಿ ಗಸ್ತು ತಿರುಗುತ್ತಿದ್ದಾರೆ.<br>2. ಅಸ್ವಸ್ಥಗೊಂಡ ವಿದೇಶಿ ವಲಸೆ ಪಕ್ಷಿಗಳಿಗೆ ತಜ್ಞ ಪಶುವೈದ್ಯರಿಂದ ಚಿಕಿತ್ಸೆ ನೀಡಲಾಗಿರುತ್ತದೆ.<br>3. ಸಾರ್ವಜನಿಕರಿಗೆ ಇಲಾಖಾ ಸಿಬ್ಬಂದಿಯಿಂದ ಕಳ್ಳಬೇಟೆ ಕುರಿತು ಜಾಗೃತಿ ಮೂಡಿಸಲಾಗಿರುತ್ತದೆ. |

ಸಂಖ್ಯೆ: ಅಪಜೀ 231 ಎಫ್‌ಡಬ್ಲ್ಯೂಎಲ್ 2021

(ಉಮೇಶ್ ವಿ. ಕತ್ತಿ)
ಅರಣ್ಯ, ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಸಚಿವರು.